ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

# ತ್ಯಾಜ್ಯವನ್ನು ಸಂಪನ್ಮೂಲವಾಗಿಸಿದ ಮೇದೇಹಳ್ಳಿ ಗ್ರಾಪಂ ಜಿಲ್ಲೆಗೆ ಮಾದರಿ




ಕರ್ನಾಟಕದಲ್ಲಿ ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಯು ಗ್ರಾಮಗಳ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸಿದೆ. ಗ್ರಾಮೀಣ ಪ್ರದೇಶಗಳಲ್ಲಿ ನೈರ್ಮಲ್ಯವನ್ನು ಸಾಧಿಸುವ ದೃಷ್ಟಿಯಿಂದ ಸಮರ್ಪಕ ತ್ಯಾಜ್ಯ ವಿಲೇವಾರಿ, ಬೂದು ನೀರು ನಿರ್ವಹಣೆ, ಮಲತ್ಯಾಜ್ಯ ನಿರ್ವಹಣೆ, ಸ್ವಚ್ಛತಾ ಶ್ರಮದಾನದಂತಹ ಹತ್ತು ಹಲವಾರು ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಮೂಲಕ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯು ಸ್ವಚ್ಛ ಗ್ರಾಮಗಳ ನಿರ್ಮಾಣಕ್ಕೆ ಶ್ರಮಿಸುತ್ತಿದೆ. ಇದೀಗ ಒಂದು ಹಂತ ಮುಂದೆ ಹೋಗಿ ತ್ಯಾಜ್ಯವನ್ನು ಸಂಪನ್ಮೂಲವಾಗಿ ಪರಿವರ್ತಿಸಲಾಗುತ್ತಿದ್ದು, ಗ್ರಾಮಗಳಿಗೆ ಆದಾಯ ಬರುವಂತಾಗಿದೆ.

ಚಿತ್ರದುರ್ಗ ತಾಲ್ಲೂಕಿನ ಮೇದೇಹಳ್ಳಿ ಗ್ರಾಮ ಪಂಚಾಯಿತಿಯಲ್ಲಿಯೂ ತ್ಯಾಜ್ಯ ನಿರ್ವಹಣೆ ಘಟಕವನ್ನು ಪರಿಣಾಮಕಾರಿಯಾಗಿ ನಿರ್ವಹಿಸುವ ಮೂಲಕ ಕೇಂದ್ರ ಸರಕಾರದ ಮಹತ್ವಕಾಂಕ್ಷಿ ಸ್ವಚ್ಛ ಭಾರತ್ ಮಿಷನ್ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗಿದೆ. ಅಷ್ಟೇ ಅಲ್ಲ, ಹಸಿ ಕಸವನ್ನು ಸಾವಯವ ಗೊಬ್ಬರವಾಗಿ ಪರಿವರ್ತಿಸಿ ರೈತರಿಗೆ ಕಡಿಮೆ ದರಕ್ಕೆ ಮಾರಾಟ ಮಾಡಲಾಗುತ್ತಿದೆ.

ಮೇದೇಹಳ್ಳಿ, ಮೇಗಳಹಳ್ಳಿ, ಬಿಳಿಕಲ್ಲು ನಾಯಕರಹಟ್ಟಿ ವಿದ್ಯಾನಗರ, ತರಳಬಾಳು ನಗರ ಹಾಗೂ ಎಂಎಸ್ ಸಾಮಿಲ್ ಸೇರಿ ಒಟ್ಟು ಆರು ಹಳ್ಳಿಗಳನ್ನು ಮೇದೇಹಳ್ಳಿ ಗ್ರಾಪಂಗಳನ್ನು ಹೊಂದಿದೆ. ಸುಮಾರು ನಾಲ್ಕು ಸಾವಿರಕ್ಕೂ ಹೆಚ್ಚು ಕುಟುಂಬಗಳಿದ್ದು, ಅಂದಾಜು 18 ಸಾವಿರಕ್ಕೂ ಹೆಚ್ಚು ಜನಸಂಖ್ಯೆ ಹೊಂದಿದೆ. ಪಂಚಾಯಿತಿ ವ್ಯಾಪ್ತಿಯಲ್ಲಿ ಮೂರು ಕಸ ಸಂಗ್ರಹಿಸುವ ವಾಹನಗಳಿದ್ದು, ಮನೆ, ಮನೆಗೆ ತೆರಳಿ ಹಸಿ ಹಾಗೂ ಒಣ ಕಸ ಸಂಗ್ರಹಿಸಲಾಗುತ್ತದೆ. ಗ್ರಾಪಂ ವ್ಯಾಪ್ತಿಯಲ್ಲಿ ಕಸ್ಟರ್ ಮಟ್ಟದ ಘನ ತ್ಯಾಜ್ಯ ನಿರ್ವಹಣೆ ಘಟಕ ಇದ್ದು, ಇಲ್ಲಿ ಶೇಖರಣೆಯಾಗುವ ಹಸಿ ಕಸವನ್ನು ವೈಜ್ಞಾನಿಕವಾಗಿ ಸಂಸ್ಕರಿಸಿ ಸಾವಯವ ಗೊಬ್ಬರವನ್ನಾಗಿಸಿ ರೈತರಿಗೆ ಮಾರಾಟ ಮಾಡಲಾಗುತ್ತದೆ. ಅಲ್ಲದೆ ಪ್ಲಾಸ್ಟಿಕ್ ಬಾಟಲಿಗಳನ್ನು ಬೇರಿಂಗ್ ಯಂತ್ರದ ಮೂಲಕ ಪ್ರೆಸ್ಸಿಂಗ್ ಮಾಡಿ ಮಾರಾಟ ಮಾಡಲಾಗುತ್ತದೆ.



# ಚಿತ್ರದುರ್ಗ ಜಿಲ್ಲೆಯಲ್ಲೇ ಮೊದಲ ಪ್ರಯತ್ನ

ಗ್ರಾಪಂ ವ್ಯಾಪ್ತಿಯಲ್ಲಿ ಸಾರ್ವಜನಿಕರಿಂದ ಕಸ ಪಡೆಯುವಾಗಲೇ ಹಸಿ, ಒಣ ಕಸವನ್ನು ಬೇರೆ ಬೇರೆ ಪಡೆಯಲಾಗುತ್ತದೆ. ಬಳಿಕ ಘನ ತ್ಯಾಜ್ಯ ನಿರ್ವಹಣೆ ಘಟಕದಲ್ಲಿನ ತೊಟ್ಟಿಯಲ್ಲಿ ಹಸಿ ಕಸ ಹಾಕಿ, ಅದಕ್ಕೆ ಬೆಲ್ಲದ ನೀರು, ಉಪ್ಪು, ಮಣ್ಣು ಹಾಕಲಾಗುತ್ತದೆ. ಕೆಲ ದಿನಗಳಲ್ಲಿ ಅದು ಸಾವಯವ ಗೊಬ್ಬರವಾಗಿ ರೂಪುಗೊಳ್ಳುತ್ತದೆ. ಹೀಗೆ ತಯಾರಾದ ಗೊಬ್ಬರವನ್ನು ರೈತರು ಖರೀದಿಸಿ ಕೃಷಿ ಕಾರ್ಯಕ್ಕೆ ಬಳಸಿಕೊಳ್ಳುತ್ತಿದ್ದಾರೆ.

ಗ್ರಾ.ಪಂ ಮಟ್ಟದಲ್ಲಿ ಕಸ ಸಂಸ್ಕರಿಸಿ ಗೊಬ್ಬರವಾಗಿ ಪರಿವರ್ತಿಸುತ್ತಿರುವುದು ಇಡೀ ಜಿಲ್ಲೆಯಲ್ಲೇ ಮೊದಲ ಪ್ರಯತ್ನವಾಗಿದ್ದು, ಈ ಮೂಲಕ ಮೇದೇಹಳ್ಳಿಯ ವೈಜ್ಞಾನಿಕ ಕಸ ವಿಲೇವಾರಿ ಹಾಗೂ ಪ್ಲಾಸ್ಟಿಕ್ ನಿರ್ಮೂಲನೆ ಕಾರ್ಯ ಇತರೆ ಗ್ರಾಮ ಪಂಚಾಯಿತಿಗಳಿಗೂ ಮಾದರಿಯಾಗಿದೆ.

